# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲ್ಲೂಕು ಜಲಾನಯನ ಅಭಿವೃದ್ಧಿ ಇಲಾಖೆಯ ಕಾಮಗಾರಿ ಅವ್ಯವಹಾರದ ಸಂಬಂಧ ಜಂಟಿ ಇಲಾಖಾ ವಿಚಾರಣೆಗೆ ವಿಚಾರಣಾಧಿಕಾರಿಗಳ ನೇಮಕದ ಆದೇಶ.

**ಓದಲಾಗಿದೆ:**

1. ಕಾರಣ ಕೇಳುವ ಪತ್ರ ಸಂಖ್ಯೆ: ಕೃತೋಇ 56 ಕೃಪವಿ 2006. ದಿ: 27–09–2006.
2. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 56 ಕೃಪವಿ 2006. ದಿ: 20–07–2007.
3. ಶ್ರೀ ಸಿ.ಕೆ. ಬಾಲಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರ ಪತ್ರದ ದಿನಾಂಕ: 10–11–2011.

*********

**ಪ್ರಸ್ತಾವನೆ:**

ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲ್ಲೂಕು ಜಲಾನಯನ ಅಭಿವೃದ್ಧಿ ಕಾಮಗಾರಿ ಅವ್ಯವಹಾರದ ಬಗ್ಗೆ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಜಲಾನಯನ ಅಭಿವೃದ್ಧಿ ಆಯುಕ್ತರು ವರದಿ ಮಾಡಿದ್ದರು. ಅದರಂತೆ ಇವರಿಗೆ ಕಾರಣ ಕೇಳುವ ನೋಟೀಸ್‌ನ್ನು ದೋಷಾರೋಪಣೆ ಪಟ್ಟಿಯೊಡನೆ ಕ್ರಮ ಸಂ. (1) ರಲ್ಲಿ ಓದಲಾದ ದಿನಾಂಕ: 27–09–2006 ರ ಪತ್ರದಲ್ಲಿ ಜಾರಿ ಮಾಡಿ, ಸದರಿ ಅಧಿಕಾರಿಗಳಿಂದ ಲಿಖಿತ ಹೇಳಿಕೆಗಳನ್ನು ಪಡೆದು, ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಕ್ರಮ ಸಂ.(2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಸಿ.ಕೆ. ಬಾಲಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅಧೀಕ್ಷಕರು, ಜಂಟಿ ಕೃಷಿ ನಿರ್ದೇಶಕರ ಕಛೇರಿ, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

1. ಶ್ರೀ ಎಂ. ಶಾಂತರಾಜು, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
2. ಶ್ರೀ ಕೆ. ಹುಚ್ಚಪ್ಪ, ಹಿಂದಿನ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
3. ಶ್ರೀ ಎನ್. ಜಯಸುಂದರ್, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
4. ಶ್ರೀ ಜಿ. ಸಿ. ಅಣ್ಣಪ್ಪಸ್ವಾಮಿ, ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
5. ಶ್ರೀ ಎ. ಎನ್. ಕರಿಯಪ್ಪ, ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
6. ಶ್ರೀ ಟಿ. ಎಲ್. ಮುಕುಂದ, ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
7. ಶ್ರೀ ಕುಮಾರಸ್ವಾಮಿ, ಹಿಂದಿನ ಅಧೀಕ್ಷಕರು, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.

--2--

ಕ್ರಮ ಸಂ. (3) ರಲ್ಲಿ ಓದಲಾದ ಪತ್ರದಲ್ಲಿ ಶ್ರೀ ಸಿ.ಕೆ. ಬಾಲಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರು ವೈಯಕ್ತಿಕ ಹಾಗೂ ಅನಾರೋಗ್ಯದ ಕಾರಣದಿಂದ ಸದರಿ ಇಲಾಖಾ ವಿಚಾರಣೆಯನ್ನು ನಡೆಸಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿರುತ್ತಾರೆ. ಆದ್ದರಿಂದ ಇವರ ಬದಲಿಗೆ ಶ್ರೀ ಜಿ. ನಂದಕುಮಾರ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ 56 ಕೃಪವಿ 2006.**

**ಬೆಂಗಳೂರು. ದಿನಾಂಕ: 26/04/2012.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸದರಿ ಪ್ರಕರಣದಲ್ಲಿ, ಶ್ರೀ ಸಿ. ಕೆ. ಬಾಲಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರು ವೈಯಕ್ತಿಕ ಹಾಗೂ ಅನಾರೋಗ್ಯದ ಕಾರಣದಿಂದ ಸದರಿ ಇಲಾಖಾ ವಿಚಾರಣೆಯನ್ನು ನಡೆಸಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿರುತ್ತಾರೆ. ಆದ್ದರಿಂದ ಈ ಪ್ರಕರಣದಲ್ಲಿನ ವಿಚಾರಣೆಯನ್ನು ಶ್ರೀ ಸಿ.ಕೆ. ಬಾಲಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಯಾವ ಹಂತದವರೆಗೆ ನಡೆಸಿ ಬಾಕಿಯಿರಿಸಿರುತ್ತಾರೆಯೋ, ಆ ಹಂತದಿಂದ ವಿಚಾರಣೆಯನ್ನು ನಡೆಸಿ ವರದಿಯನ್ನು ನೀಡುವಂತೆ ಕೋರಿ ಇವರ ಬದಲಿಗೆ ಶ್ರೀ ಜಿ. ನಂದಕುಮಾರ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ಸಿ.ಸಿ.ಎ) ನಿಯಮ 11ರ ಜೊತೆಗೆ ಓದಲಾದ 13 ರಡಿಯಲ್ಲಿ ಜಂಟಿ ಇಲಾಖಾವಿಚಾರಣೆ ನಡೆಸಿ ವರದಿ ಸಲ್ಲಿಸುವಂತೆ ನಿರ್ದೇಶಿಸಲಾಗಿದೆ.

1. ಶ್ರೀ ಎಂ. ಶಾಂತರಾಜು, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
2. ಶ್ರೀ ಕೆ. ಹುಚ್ಚಪ್ಪ, ಹಿಂದಿನ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
3. ಶ್ರೀ ಎನ್. ಜಯಸುಂದರ್, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
4. ಶ್ರೀ ಜಿ. ಸಿ. ಅಣ್ಣಪ್ಪಸ್ವಾಮಿ, ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
5. ಶ್ರೀ ಎ. ಎನ್. ಕರಿಯಪ್ಪ, ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
6. ಶ್ರೀ ಟಿ. ಎಲ್. ಮುಕುಂದ, ಕೃಷಿ ಸಹಾಯಕ, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.
7. ಶ್ರೀ ಕುಮಾರಸ್ವಾಮಿ, ಹಿಂದಿನ ಅಧೀಕ್ಷಕರು, ಜಲಾನಯನ ಅಭಿವೃದ್ಧಿ ಇಲಾಖೆ, ತರೀಕೆರೆ.

ಇನ್ನುಳಿದಂತೆ ದಿನಾಂಕ: 20-07-2007 ಮತ್ತು ದಿನಾಂಕ: 18-11-2009ರ ಆದೇಶದಂತೆ ಶ್ರೀ ಎಂ. ಆರ್. ತಿಮ್ಮರಾಜು, ಹಿಂದಿನ ಅಧೀಕ್ಷಕರು, ಜಂಟಿ ಕೃಷಿ ನಿರ್ದೇಶಕರ ಕಛೇರಿ, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯಾಗಿ ಮುಂದುವರೆಸಿದೆ. ಇನ್ನುಳಿದಂತೆ ಯಾವುದೇ ಬದಲಾವಣೆಗಳಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
4. ಜಂಟಿ ಕೃಷಿ ನಿರ್ದೇಶಕರು, ಚಿಕ್ಕಮಗಳೂರು/ಹಾಸನ.
5. ಜಿಲ್ಲಾ ಜಲಾನಯನ ಅಭಿವೃದ್ಧಿ ಇಲಾಖೆ, ಚಿಕ್ಕಮಗಳೂರು/ಚಿತ್ರದುರ್ಗ.
6. ಶ್ರೀ ಸಿ.ಕೆ. ಬಾಲಕೃಷ್ಣ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ. 2209, ತ್ರಿಕನ್ಯಾ, 80 ಅಡಿ ರಸ್ತೆ, ಹೆಚ್.ಎ.ಎಲ್. 3ನೇ ಹಂತ, ಇಂದಿರಾನಗರ, ಬೆಂಗಳೂರು-38.
7. ಶ್ರೀ ಜಿ. ನಂದಕುಮಾರ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ 14, 1ನೇ ಮುಖ್ಯ ರಸ್ತೆ, ಎಸ್.ಟಿ. ಬೆಡ್, ಕೋರಮಂಗಲ, 4ನೇ ಹಂತ, ಬೆಂಗಳೂರು-34.
8. ಶ್ರೀ ಎಂ. ಆರ್. ತಿಮ್ಮರಾಜು, ಹಿಂದಿನ ಅಧೀಕ್ಷಕರು, ಜಂಟಿ ಕೃಷಿ ನಿರ್ದೇಶಕರ ಕಛೇರಿ, ಚಿಕ್ಕಮಗಳೂರು.
9. ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಜಲಾನಯನ ಅಭಿವೃದ್ಧಿ ಇಲಾಖೆ, ಚಿಕ್ಕ ಮಂಗಳೂರು.
10. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
12. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು.
13. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ಮುಖಾಂತರ).
14. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.